ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/ 04/ಇಸಿಎಸ್(1)/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com

ದಿನಾಂಕ: 05-07-2023

## ಸುತ್ತೋಲೆ

ವಿಷಯ: ಜುಲೈ 2023 ರ ಡಿಪ್ಲೋಮ ಥಿಯರಿ ಪರೀಕ್ಷೆಯ ದಿನಾಂಕ:05.07.2023 ರ ಬುಧವಾರ ಜರುಗಬೇಕಾಗಿದ್ದ ಪರೀಕ್ಷೆಗಳನ್ನು ಮುಂದೂಡಿರುವ ಬಗ್ಗೆ.

ಉಲ್ಲೇಖ: ಮಾನ್ಯ ಆಯುಕ್ತರ ಕಛೇರಿ ಸುತ್ತೋಲೆ ಸಂಖ್ಯೆ:ಬಿಟಿಇ 03 ಇಎಪಿ 2023 ದಿನಾಂಕ:07.06.2023

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳಲ್ಲಿ ಜುಲೈ 2023 ರ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗಳು ದಿನಾಂಕ:ದಿನಾಂಕ:05-07-2023 ರಂದು ಪ್ರಾರಂಭವಾಗುವುದೆಂದು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರಿ ಮಳೆ ಮುನ್ಸೂಚನೆ ಕಾರಣ ರೆಡ್ ಅಲರ್ಟ್ ಘೋಷಿಸಿರುವ ಹಿನ್ನೆಲೆಯಲ್ಲಿ, ಜುಲೈ 2023 ರ ಡಿಪ್ಲೋಮ ಥಿಯರಿ ಪರೀಕ್ಷೆಯ ವೇಳಾಪಟ್ಟಿಯನ್ವಯ **ದಿನಾಂಕ:05.07.2023 ರಂದು ರಾಜ್ಯಾದ್ಯಂತ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಬೇಕಾಗಿದ್ದ ಎಲ್ಲಾ ಥಿಯರಿ ಪರೀಕ್ಷೆಗಳನ್ನು ದಿನಾಂಕ: 25-07-2023 ಕ್ಕೆ ಮುಂದೂಡಲಾಗಿದೆ.** ಪರೀಕ್ಷಾ ವೇಳೆಯಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ. ಇನ್ನುಳಿದಂತೆ ಪರೀಕ್ಷಾ ವೇಳಾಪಟ್ಟಿಯಲ್ಲಿ ಬೇರೆ ಯಾವುದೇ ಬದಲಾವಣೆ ಇರುವುದಿಲ್ಲವೆಂದು ತಿಳಿಸಲಾಗಿದೆ. ಈ ವಿಷಯವನ್ನು ವಿದ್ಯಾರ್ಥಿಗಳು / ಉಪನ್ಯಾಸಕರುಗಳು / ಪೋಷಕರುಗಳ ಗಮನಕ್ಕೆ ತಪ್ಪದೇ ತರುವಂತೆ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಪ್ರಾಂಶುಪಾಲರುಗಳು/ ಮುಖ್ಯ ಅಧೀಕ್ಷಕರು/ ಮುಖ್ಯ ವೀಕ್ಷಕರು/ ಉಪ ಮುಖ್ಯ ಅಧೀಕ್ಷಕರುಗಳಿಗೆ – ಮಾಹಿತಿಗಾಗಿ ಮತ್ತು ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಪರೀಕ್ಷಾ ಕೊಠಡಿಗಳಲ್ಲಿ ಪರಿಚಲನೆ ಮೂಲಕ ಪ್ರಚುರಪಡಿಸಲು

ಪ್ರತಿ:
1. ಖಜಾನೆ ನಿರ್ದೇಶಕರು, ಕರ್ನಾಟಕ ಸರ್ಕಾರ, ಬೆಂಗಳೂರು
2. ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ಬೆಂಗಳೂರು
3. ರಾಜ್ಯದ ಎಲ್ಲಾ ಜಿಲ್ಲೆಗಳ ಖಜಾನೆ/ಉಪಖಜಾನೆ ಅಧಿಕಾರಿಗಳು -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
4. ಸಂಬಂಧಪಟ್ಟ ಪೋಲೀಸ್ ಠಾಣಾಧಿಕಾರಿಗಳಿಗೆ -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
5. ಪರೀಕ್ಷಾ ತನಿಖಾ ದಳಗಳ ಮುಖಂಡರುಗಳು-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
6. ಮಾನ್ಯ ಆಯುಕ್ತರ ಆಪ್ತ ಶಾಖೆ, ಕಾ.&ತಾಂ.ಶಿ.ಇಲಾಖೆ –ಮಾಹಿತಿಗಾಗಿ
7. ಮಾನ್ಯ ನಿರ್ದೇಶಕರ ಆಪ್ತಶಾಖೆ –ಮಾಹಿತಿಗಾಗಿ
8. ಸಾರ್ವಜನಿಕ ಸಂಪರ್ಕಾಧಿಕಾರಿ. ತಾಂ.ಶಿ.ಇಲಾಖೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
9. ಇ-ಗವರ್ನೆನ್ಸ್ ವಿಭಾಗ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
10. ಗಣಕ ಕೇಂದ್ರ- ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು ಮತ್ತು ಅಗತ್ಯ ಕ್ರಮಕ್ಕಾಗಿ
11. ಕಾರ್ಯದರ್ಶಿಯವರ ಆಪ್ತ ಶಾಖೆ